RNU AIR DHARWAD

# MARCH 19, 2026

# AKASHAVANI - DHARWAD

# PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಬೆಂಗಳೂರಿನಲ್ಲಿ ಸ್ಮಾರ್ಟ್ ಸಿಟಿ ಯೋಜನೆ ಕಾರ್ಯಗತಗೊಳಿಸುವ ಕುರಿತು, ಜಪಾನ್ ದೇಶದ ಮೂಲ ಸೌಕರ್ಯ, ಸಾರಿಗೆ ಮತ್ತು ಪ್ರವಾಸೋದ್ಯಮ ತಂಡವು, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಖಾತೆ ಸಚಿವ ಪ್ರಿಯಾಂಕ ಖರ್ಗೆ ಸೇರಿದಂತೆ, ರಾಜ್ಯ ಸರ್ಕಾರದ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿತು. ಈ ಸಂದರ್ಭ ಜಪಾನಿನ ಸ್ಮಾರ್ಟ್ ಸಿಟಿ ಸಹಕಾರ ಯೋಜನೆಯ ಮಾದರಿಯನ್ನು ಪ್ರದರ್ಶಿಸಲಾಯಿತು. ಸಭೆ ಬಳಿಕ ಮಾತನಾಡಿದ, ಸಚಿವ ಪ್ರಿಯಾಂಕ್ ಖರ್ಗೆ, 'ಕರ್ನಾಟಕ ಸರ್ಕಾರವು ಮುಂಬರುವ ವರ್ಷಗಳಲ್ಲಿ, ಬೆಂಗಳೂರು ಹಾಗೂ ರಾಜ್ಯದ ಇತರ ನಗರಗಳನ್ನು ಭವಿಷ್ಯದ ಸವಾಲುಗಳನ್ನು ಎದುರಿಸುವ ನಿಟ್ಟಿನಲ್ಲಿ ಸನ್ನದ್ಧ ನಗರಗಳನ್ನಾಗಿ ಪರಿವರ್ತಿಸಲು ಹಾಗೂ ನಾಗರಿಕ ಕೇಂದ್ರಿತ ನಗರಗಳನ್ನಾಗಿ ಅಭಿವೃದ್ಧಿಪಡಿಸಲು ಸಜ್ಜಾಗಿದೆ' ಎಂದರು.

<><><>

ರಾಜ್ಯದಲ್ಲಿ, ಸಾವಿರದ 500 ಕ್ಕೂ ಹೆಚ್ಚು ಕಾಲೇಜುಗಳನ್ನು ಹೊಂದಿರುವ ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯ, ಸದ್ಯದಲ್ಲೇ ಬೆಂಗಳೂರು, ರಾಮನಗರದಲ್ಲಿರುವ 216 ಎಕರೆ ಕ್ಯಾಂಪಸ್ ಗೆ ಸ್ಥಳಾಂತರಗೊಳ್ಳಲಿದೆ ಎಂದು ವಿಶ್ವವಿದ್ಯಾಲಯದ ಉಪ ಕುಲಪತಿ ಡಾಕ್ಟರ ಭಗವಾನ್ ಬಿ.ಸಿ ತಿಳಿಸಿದ್ದಾರೆ. ಬಳ್ಳಾರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ರಾಜ್ಯದ 25 ಸರ್ಕಾರಿ ಮೆಡಿಕಲ್ ಕಾಲೇಜುಗಳಲ್ಲಿ ಬೋಧನಾ ಸಿಬ್ಬಂದಿ ಕೊರತೆ ಇದೆ, ಈ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗಿದೆ ಎಂದು ತಿಳಿಸಿದರು. ಮಾದಕ ವ್ಯಸನಗಳ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ, ಕೇಂದ್ರ ಸರ್ಕಾರ ನಶಾ ಮುಕ್ತ ಭಾರತ ಅಭಿಯಾನ ಆರಂಭಿಸಿದ್ದು, ಈಗಾಗಲೇ 16 ಜಿಲ್ಲೆಗಳಲ್ಲಿ ಪ್ರಗತಿಯಲ್ಲಿದೆ. ರಾಜ್ಯದ ಪ್ರತಿ ಕಾಲೇಜಿನಲ್ಲಿ ಕಾರ್ಯತಂಡ ರಚಿಸಿ, ಡ್ರಗ್ಸ್ ಹಾವಳಿ ತಡೆಗೆ ಕಾರ್ಯಕ್ರಮ ರೂಪಿಸಲಾಗುತ್ತಿದೆ ಎಂದರು. ಅಂಗಾಂಗದಾನದ ಕುರಿತು ಅರಿವು ಮೂಡಿಸಲಾಗುತ್ತಿದ್ದು, ರಾಜ್ಯದಲ್ಲಿ 58 ಸಾವಿರ ಜನರು ಅಂಗಾಂಗ ದಾನಕ್ಕೆ ನೋಂದಣಿ ಮಾಡಿದ್ದಾರೆ ಎಂದರು.

<><><>

ಹೊಸ ವರ್ಷ ಯುಗಾದಿ ಹಿನ್ನೆಲೆ, ಇಂದು ನಾಡಿನ ವಿವಿಧೆಡೆಗಳಲ್ಲಿ, ಸಂಭ್ರಮದ ಹಬ್ಬದಾಚರಣೆ ಮನೆ ಮಾಡಿದೆ. ಕೋಲಾರ ಜಿಲ್ಲೆಯಾದ್ಯಂತ ಯುಗಾದಿ ಹಬ್ಬವನ್ನು ಸಂಭ್ರಮ ಸಡಗರದಿಂದ ಆಚರಿಸಲಾಗುತ್ತಿದೆ. ಮನೆಗಳಲ್ಲಿ ತಳಿರು–ತೋರಣ, ಹೂಗಳಿಂದ ಸಿಂಗರಿಸಿ, ಜನರು ಹೊಸಬಟ್ಟೆ ತೊಟ್ಟು ಹಬ್ಬವನ್ನು ಸಡಗರದಿಂದ ಆಚರಿಸುತ್ತಿದ್ದಾರೆ. ಬೇವು – ಬೆಲ್ಲ ಸಮ್ಮಿಶ್ರಣವನ್ನು ಸಾಂಪ್ರದಾಯಿಕವಾಗಿ ಪರಸ್ಪರ ಹಂಚಿಕೊಂಡು ಸಂಭ್ರಮಿಸುತ್ತಿದ್ದಾರೆ. ಯುಗಾದಿ ಹಬ್ಬದ ಹಿನ್ನೆಲೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ಗಣ್ಯರು ನಾಡಿನ ಜನತೆಗೆ ಶುಭಾಶಯಗಳನ್ನು ಕೋರಿದ್ದಾರೆ.

<><><>

ಯುಗಾದಿ ಪ್ರಯುಕ್ತ ಪ್ರಯಾಣಿಕರ ದಟ್ಟಣೆ ನಿವಾರಿಸಲು, ನೈಋತ್ಯ ರೇಲ್ವೆ ವಲಯ, ಹುಬ್ಬಳ್ಳಿ–ಬೆಂಗಳೂರು ಮಧ್ಯೆ ವಿಶೇಷ ರೈಲು ಸಂಚಾರ ಸೌಲಭ್ಯ ಕಲ್ಪಿಸಿದೆ. ಹುಬ್ಬಳ್ಳಿ ಎಸ್.ಎಸ್.ಎಸ್ ರೈಲು ನಿಲ್ದಾಣದಿಂದ, 22 ರಂದು ಸಂಜೆ 6.15 ಕ್ಕೆ ಹೊರಡಲಿರುವ ರೈಲು, ಮರು ದಿನ ಬೆಳಗ್ಗೆ 9 ಗಂಟೆಗೆ ಬೆಂಗಳೂರು ರೈಲು ನಿಲ್ದಾಣ ತಲುಪಲಿದೆ.

<><><>

ಏಪ್ರಿಲ್ 9 ರಂದು ನಿಗದಿಯಾಗಿರುವ, ರಾಜ್ಯ ವಿಧಾನಸಭಾ ಉಪ ಚುನಾವಣೆಗೆ, ಬಾಗಲಕೋಟೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ವೀರಣ್ಣ ಚರಂತಿಮಠ ಹಾಗೂ ದಾವಣಗೆರೆ ದಕ್ಷಿಣ, ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಶ್ರೀನಿವಾಸ ಟಿ. ದಾಸಕರಿಯಪ್ಪ ಆಯ್ಕೆಯಾಗಿದ್ದಾರೆ.

<><><>

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಗೆ, ಮತ ಯಂತ್ರಗಳ ಮೊದಲ ಹಂತದ ರ್‍ಯಾಂಡಮೈಸೆಶನ್ ಪ್ರಕ್ರಿಯೆ ಯಶಸ್ವಿಯಾಗಿ ಜರುಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಡಾಕ್ಟರ ಗಂಗಾಧರ ಸ್ವಾಮಿ ತಿಳಿಸಿದ್ದಾರೆ.

<><><>

ಗದಗ ಜಿಲ್ಲೆ, ನಾಗಾವಿಯ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ, ಸ್ಪರ್ಧಾತ್ಮಕ ಪರೀಕ್ಷೆಗಳ  ಕುರಿತು ಒಂದು ದಿನದ ಕಾರ್ಯಾಗಾರ ಆಯೋಜಿಸಲಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಕಾರ್ಯಾಗಾರ ಉದ್ಘಾಟಿಸಿದರು.

<><><>

ಲಿಂಗಾನುಪಾತ ಸಮತೋಲನ ಕಾಯ್ದುಕೊಳ್ಳುವ ಉದ್ದೇಶದಿಂದ, ಯಾದಗಿರಿ ಜಿಲ್ಲೆಯಲ್ಲಿ ಗರ್ಭಪಾತ ಪ್ರಕರಣಗಳ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾಕ್ಟರ ಮಹೇಶ ಬಿರಾದಾರ ತಿಳಿಸಿದ್ದಾರೆ.

<><><>

ರಾಜ್ಯದ ಎತ್ತಿನ ಹೊಳೆ ಯೋಜನೆ ವ್ಯಾಪ್ತಿಯ, ಹಾಸನ ಮತ್ತು ತುಮಕೂರು ಜಿಲ್ಲೆಗಳ 277 ಎಕರೆ ಅರಣ್ಯ ಪ್ರದೇಶದ ಬಳಕೆಗೆ ಕೇಂದ್ರ ಸರ್ಕಾರ ಷರತ್ತು ಬದ್ಧ ಅನುಮತಿ ನೀಡಿದೆ ಎಂದು ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಶಾಸಕ ಬಿ.ಎನ್ ರವಿಕುಮಾರ ತಿಳಿಸಿದ್ದಾರೆ.

<><><>

ಚಿಕ್ಕಬಳ್ಳಾಪುರ ಜಿಲ್ಲೆಯ ವಿವಿಧ ಹೊಟೇಲ್, ಬೇಕರಿ, ಡಾಬಾ, ರೆಸ್ಟೋರೆಂಟ್ ಹಾಗೂ ಬೀದಿ ಬದಿ ಹೊಟೇಲ್ ಗಳ ಮೇಲೆ ದಾಳಿ ನಡೆಸಿರುವ, ಆಹಾರ ಇಲಾಖೆ ಅಧಿಕಾರಿಗಳು 30 ಗೃಹ ಬಳಕೆ ಸಿಲಿಂಡರುಗಳನ್ನು ಜಪ್ತಿ ಮಾಡಿದ್ದಾರೆ ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ.

<><><>

ಗದಗ ಜಿಲ್ಲೆಯಲ್ಲಿ, ಮಾನವ ಅಭಿವೃದ್ಧಿ ವರದಿ ಸೇರಿದಂತೆ, ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆಯ ವರದಿ ತಯಾರಿಕೆಗೆ, ಜಿಲ್ಲಾ ಮಟ್ಟದ ವಲಯವಾರು ಉಪಸಮಿತಿಗಳ ಸಮಿತಿ ಸಭೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿತು. ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಸಭೆಯ  ಅಧ್ಯಕ್ಷತೆ ವಹಿಸಿದ್ದರು.

<><><>

ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ, ಕಳೆದ 3 ದಿನಗಳಿಂದ ಗುಡುಗು ಸಹಿತ ಮಳೆಯಾಗುತ್ತಿದೆ. ಚಿಕ್ಕಮಗಳೂರು ತಾಲೂಕಿನ, ಕೆಲವೆಡೆ ಸಾಧಾರಣ ಮಳೆಯಾಗಿದೆ. ಎನ್.ಆರ್ ಪುರ ತಾಲೂಕಿನ ಬಾಳೆಹೊನ್ನೂರು ಸಮೀಪದ ಸಂಗಮೇಶ್ವರ ಪೇಟೆ, ಮಾಗಲು, ಖಾಂಡ್ಯ ಸುತ್ತ ಮುತ್ತ ಗುಡುಗು ಸಹಿತ ಆಲಿಕಲ್ಲು ಮಳೆಯಾಗಿದೆ. ಸಾಧಾರಣ ಮಳೆಯಿಂದ ಕಾಫಿ ಹೂಗಳು ಅರಳುತ್ತವೆ, ಆದರೆ ಆಲಿಕಲ್ಲು ಮಳೆಯಾದ ಹಿನ್ನೆಲೆ, ಜಿಲ್ಲೆಯ ಕಾಫಿ ಬೆಳೆಗಾರರು ಆತಂಕಕ್ಕೆ ಒಳಗಾಗಿದ್ದಾರೆ.

<><><>

ಯಾದಗಿರಿ ಜಿಲ್ಲೆಯ ವಿವಿಧೆಡೆ ಸುರಿದ ಗುಡುಗು, ಸಿಡಿಲು, ಗಾಳಿ ಸಹಿತ ಆಲಿಕಲ್ಲು ಮಳೆಗೆ, ಯಾದಗಿರಿ, ಗುರುಮಠಕಲ್ ಮತ್ತು ವಡಗೇರಾ ವಿದ್ಯುತ್ ಪ್ರಸರಣ ಉಪವಿಭಾಗಗಳ ವ್ಯಾಪ್ತಿಯ ಒಟ್ಟು 36 ವಿದ್ಯುತ್ ಕಂಬಗಳು ಉರುಳಿ ಬಿದ್ದಿವೆ. ಇದೇ ವೇಳೆ ಸುರಪುರ ವಿಭಾಗಕ್ಕೆ ಒಳಪಟ್ಟ 9 ಕಂಬಗಳು ಹಾನಿಗೊಳಗಾಗಿದ್ದು, ಜೆಸ್ಕಾಂ ಸಿಬ್ಬಂದಿ ಪ್ರಮುಖ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯನ್ನು ಮರುಸ್ಥಾಪಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>